ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ: DEPARTMENT / SUBJECT: ಇತರ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ ದಿನಾಂಕ : DATE : 6/11/2019

# ಸ್ತ್ರೀಯರಿಗೆ ಮುಕ್ತ ಪ್ರವೇಶ

**ನವೆಂಬರ್ 17 ರಿಂದ 30ರವರೆಗೆ ದರ್ಶನ**
**ವಾರ್ಷಿಕ ವಿಶೇಷ ಪೂಜಾ ಕೈಂಕರ್ಯ ಶುರು**



ತಿರುವನಂತಪುರಂ: ಶಬರಿಮಲೆ ಕುರಿತು ಸುಪ್ರೀಂಕೋರ್ಟ್‌ನ ತೀರ್ಪನ್ನು ಸರ್ಕಾರ ಜಾರಿಗೆ ಚಾಚೂತಪ್ಪದೆ ಜಾರಿಗೆ ತರುತ್ತದೆ. ಹಾಗಾಗಿ ಅಯ್ಯಪ್ಪ ದರ್ಶನಕ್ಕೆ ಮಹಿಳೆಯರಿಗೆ ಮುಕ್ತ ಪ್ರವೇಶ ಕಲ್ಪಿಸಲಾಗುವುದು ಎಂದು ಕೇರಳ ಸರ್ಕಾರದ ಸಚಿವ ಕಡಕಂಪಲ್ಲಿ ಸುರೇಂದ್ರನ್ ಮಂಗಳವಾರ ವಿಧಾನಸಭಾ ಅಧಿವೇಶನದಲ್ಲಿ ಸ್ಪಷ್ಟಪಡಿಸಿದ್ದಾರೆ.

ಈ ತಿಂಗಳು ಶಬರಿಮಲೆ ದೇವಸ್ಥಾನದ ಬಾಗಿಲು ತೆರೆಯಲಿದೆ. ರಾಜ್ಯ ಸರ್ಕಾರ ಮಾಡಿರುವ ವ್ಯವಸ್ಥೆಗಳು ಮತ್ತು ಈ ವಿಷಯದಲ್ಲಿ ನಿಧಿ ಹಂಚಿಕೆ ಕುರಿತ ಪ್ರಶ್ನೆಗೆ ಪ್ರತಿಕ್ರಿಯೆ ನೀಡುವ ಸಂದರ್ಭದಲ್ಲಿ ಸಚಿವರು ಈ ಹೇಳಿಕೆ ನೀಡಿದ್ದಾರೆ.

ಸುಪ್ರೀಂ ಕೋರ್ಟ್ ತೀರ್ಪನ್ನು ಜಾರಿಗೆ ತರುವುದಿಲ್ಲ ಎಂದು ಕೇರಳ ಸರ್ಕಾರ ಹೇಳಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ ಸುರೇಂದ್ರನ್, ಸುಪ್ರೀಂ ತೀರ್ಪನ್ನು ಸ್ವೀಕರಿಸುವುದಿಲ್ಲ ಎಂದು ಹೇಳುವ ಧೈರ್ಯವಿದೆಯೇ ಎಂದು ಪ್ರತಿಪಕ್ಷಗಳಿಗೆ ಸವಾಲು ಹಾಕಿದರು.

ಪ್ರಸ್ತುತ ಬಿಕ್ಕಟ್ಟನ್ನು ಎದುರಿಸಲು ನಾವು ಅಯ್ಯಪ್ಪ ದೇವಸ್ವಂ ಮಂಡಳಿಗೆ 100 ಕೋಟಿ ರೂ.ಗಳನ್ನು ಮೀಸಲಿಟ್ಟಿದ್ದೇವೆ ಮತ್ತು ಈಗಾಗಲೇ 30 ಕೋಟಿ ರೂಪಾಯಿ ನೀಡಲಾಗಿದೆ ಎಂದು ಅವರು ತಿಳಿಸಿದರು.

ಎಲ್ಲಾ ವಯಸ್ಸಿನ ಮಹಿಳೆಯರನ್ನು ಶಬರಿಮಲೆ ದೇವಸ್ಥಾನಕ್ಕೆ ಪ್ರವೇಶಿಸಲು ಅನುಮತಿ ನೀಡುವ ಸುಪ್ರೀಂ ಕೋರ್ಟ್ ಆದೇಶವನ್ನು ತಪ್ಪಿಸಲು ಕಾನೂನುಗಳನ್ನು ಮಾಡಲು ಸಾಧ್ಯವಿಲ್ಲ ಮತ್ತು ಅದನ್ನು ಕಾರ್ಯಗತಗೊಳಿಸಲು ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಪುನರುಚ್ಚರಿಸಿದ್ದಾರೆ.